**ಕರ್ನಾಟಕ ಸರ್ಕಾರ**

ಸಂಖ್ಯೆ:ನಅಇ 36 ಬಿಎಂಆರ್ 2016

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸ ಸೌಧ,
ಬೆಂಗಳೂರು, ದಿನಾಂಕ:21-10-2016.

**ಅಧಿಸೂಚನೆ**

ಸರ್ಕಾರದ ಅಧಿಸೂಚನೆ-II ಸಂಖ್ಯೆ:ನಅಇ 36 ಬಿಎಂಆರ್ 2016, ದಿನಾಂಕ: 24-06-2016 ರಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 4(ಎ)(1) ರನ್ವಯ ಬೆಂಗಳೂರು ನಗರ/ಗ್ರಾಮಾಂತರ ಹಾಗೂ ರಾಮನಗರ ಜಿಲ್ಲೆಯ ಒಟ್ಟು 331 ಗ್ರಾಮಗಳನ್ನೊಳಗೊಂಡಂತೆ ಉಪನಗರ ವರ್ತುಲ ರಸ್ತೆ (STRR) ಸ್ಥಳೀಯ ಯೋಜನಾ ಪ್ರದೇಶವನ್ನು ಘೋಷಿಸಲಾಗಿದೆ. ಸದರಿ ಪ್ರದೇಶದ ವ್ಯಾಪ್ತಿಯಲ್ಲಿನ ಅಭಿವೃದ್ಧಿಗಳನ್ನು ನಿಯಂತ್ರಿಸಲು ಮತ್ತು ಮಹಾಯೋಜನೆ ತಯಾರಿಸಲು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 4(ಸಿ)(1) ರಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಉಪನಗರ ವರ್ತುಲ ರಸ್ತೆ (STRR) ಯೋಜನಾ ಪ್ರಾಧಿಕಾರವನ್ನು ರಚಿಸಿ ಆದೇಶಿಸಲಾಗಿದೆ.

ಸದರಿ ಯೋಜನಾ ಪ್ರಾಧಿಕಾರಕ್ಕೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 4(ಸಿ)(3)(i) ರನ್ವಯ ಮಹಾನಗರ ಆಯುಕ್ತರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ ಇವರನ್ನು ಅಧ್ಯಕ್ಷರನ್ನಾಗಿ ಹಾಗೂ ಕಲಂ 4(ಸಿ)(3)(ii) ರನ್ವಯ ಮಹಾನಗರ ಯೋಜಕರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ ಇವರನ್ನು ಸದಸ್ಯ ಕಾರ್ಯದರ್ಶಿಯನ್ನಾಗಿ ನೇಮಕ ಮಾಡಲಾಗಿದೆ.

ನಂ. 1468
ತಾ. 21/10/16
ಬೆಂಗಳೂರು

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎನ್. ನರಸಿಂಹಮೂರ್ತಿ)
ಸರ್ಕಾರದ ಅಧೀನ ಕಾರ್ಯದರ್ಶಿ
ನಗರಾಭಿವೃದ್ಧಿ ಇಲಾಖೆ.

**ಇವರಿಗೆ:**

ಕರ್ನಾಟಕ ರಾಜ್ಯಪತ್ರ ಸಂಚಾಲಕರು, ಬೆಂಗಳೂರು – ಮೇಲ್ಕಂಡ ಅಧಿಸೂಚನೆಯನ್ನು ಕರ್ನಾಟಕ ರಾಜ್ಯ ವಿಶೇಷ ಪತ್ರದಲ್ಲಿ ಪ್ರಕಟಿಸಿ ಮಹಾನಗರ ಆಯುಕ್ತರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ, ಬೆಂಗಳೂರು ಇವರಿಗೆ 50 ಪ್ರತಿಗಳನ್ನು ಹಾಗೂ ನಗರಾಭಿವೃದ್ಧಿ ಇಲಾಖೆ, ಬೆಂಗಳೂರು-1 ಶಾಖೆಗೆ 50 ಪ್ರತಿಗಳನ್ನು ಒದಗಿಸುವಂತೆ ಕೋರಿದೆ.

**ಪ್ರತಿ:**

1) ಮಹಾನಗರ ಆಯುಕ್ತರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ, ಬೆಂಗಳೂರು
2) ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ, ಬೆಂಗಳೂರು.
3) ಜಿಲ್ಲಾಧಿಕಾರಿಗಳು, ಬೆಂಗಳೂರು ನಗರ/ಗ್ರಾಮಾಂತರ ಜಿಲ್ಲೆ, ಬೆಂಗಳೂರು.
4) ಜಿಲ್ಲಾಧಿಕಾರಿಗಳು, ರಾಮನಗರ ಜಿಲ್ಲೆ, ರಾಮನಗರ.
5) ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರು, ಬೆಂಗಳೂರು.
6) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.